**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಮಂಜುನಾಥ ಭಂಡಾರಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಉತ್ತರ:**

**ವಿಷಯ:** "ಅಧಿಕಾರ ಇದ್ದೂ ಇಲ್ಲದಂತಾದ ಚುನಾಯಿತ ಸದಸ್ಯರು": ಎಂಬ ಶೀರ್ಷಿಕೆಯಡಿ ದಿನಾಂಕ:30.06.2024ರ ಉದಯವಾಣಿ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ಸಾಲಿಗ್ರಾಮ ಪಟ್ಟಣ ಪಂಚಾಯತ್‌ನಲ್ಲಿ ಅಧ್ಯಕ್ಷ ಉಪಾಧ್ಯಕ್ಷರ ಮೊದಲಾರ್ಧದ ಅವಧಿ ಅಂತ್ಯಗೊಂಡು ಹಲವಾರು ತಿಂಗಳು ಕಳೆದಿವೆ. ಮೀಸಲಾತಿ ಘೋಷಣೆಯಾಗದ ಹಿನ್ನಲೆಯಲ್ಲಿ 2ನೇ ಅವಧಿಗೆ ಅಧ್ಯಕ್ಷ ಉಪಾಧ್ಯಕ್ಷರ ನೇಮಕವಾಗದೇ ಹತ್ತಾರು ಸಮಸ್ಯೆ ಸೃಷ್ಟಿಯಾಗಿದೆ. ಚುನಾಯಿತ ಅಧ್ಯಕ್ಷರಿಲ್ಲದೆ ಉಡುಪಿ ನಗರಸಭೆ ಮತ್ತು ಸಾಲಿಗ್ರಾಮ ಪಟ್ಟಣ ಪಂಚಾಯತ್ ಒಂದು ವರ್ಷಕ್ಕೂ ಹೆಚ್ಚು ಅವಧಿಯಿಂದ ಕಾರ್ಯಾಚರಿಸುತ್ತಿದೆ.

ರಾಜ್ಯದ ಯಾವುದೇ ನಗರ ಸ್ಥಳೀಯ ಸಂಸ್ಥೆಗೆ ಸರ್ಕಾರದ ಮಟ್ಟದಲ್ಲಿ 2ನೇ ಅವಧಿಗೆ ಅಧ್ಯಕ್ಷ ಉಪಾಧ್ಯಕ್ಷ ಆಯ್ಕೆ ನಡೆಯದೇ ಇರುವುದರಿಂದ ಈ ಸಮಸ್ಯೆ ಎಲ್ಲೆಡೆಯೂ ಇದೆ. ಒಂದು ಬಾರಿ ಚುನಾಯಿತ ಸದಸ್ಯರು ಪ್ರಮಾಣ ವಚನ ಸ್ವೀಕರಿಸಿದರೆ ಮತ್ತೆ ಐದು ವರ್ಷ ಮಾತ್ರ ಆ ಮಂಡಳಿಯ ಅಧಿಕಾರಾವಧಿ ಮೊದಲ ಅವಧಿಗೆ ಅಧ್ಯಕ್ಷ ಉಪಾಧ್ಯಕ್ಷರ ಆಯ್ಕೆಯಾಗಿ ಈಗ ಒಂದು ವರ್ಷ ಕಳೆದು ಹೋದದ್ದರಿಂದ ಮುಂದೆ ಬರುವ ಅಧ್ಯಕ್ಷ ಉಪಾಧ್ಯಕ್ಷರಿಗೆ ಈ ಅವಧಿ ಲುಪ್ತವಾಗುತ್ತದೆ.

ಉಡುಪಿ, ಸಾಲಿಗ್ರಾಮ ಸೇರಿದಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಆಡಳಿತಾಧಿಕಾರಿಗಳ ಆಡಳಿತವಿದ್ದು ಅಧಿಕಾರಿಗಳ ಮಾತೇ ಅಂತಿಮ ಎನ್ನುವಂತಾಗಿದೆ. ಜನರ ಕೆಲಸಗಳು ಸರಿಯಾಗಿ ಆಗುತ್ತಿಲ್ಲ. ಮಧ್ಯವರ್ತಿಗಳ ಹಾವಳಿ ಹೆಚ್ಚುತ್ತಿದೆ. ಚುನಾಯಿತ ಸದಸ್ಯರಿಗೆ ನೇರ ಅಧಿಕಾರವಿಲ್ಲದ ಕಾರಣ ಹೆಸರಿಗಷ್ಟೇ ಸದಸ್ಯರು ಎಂಬ ಆರೋಪ ಕೇಳಿ ಬರುತ್ತಿದೆ. ಹಿಂದಿನ ಅವಧಿಯು ಅಂತ್ಯಗೊಂಡ ಒಂದೆರಡು ತಿಂಗಳಲ್ಲಿ ಮುಂದಿನ ಅವಧಿಯ ಅಧ್ಯಕ್ಷ-ಉಪಾಧ್ಯಕ್ಷ ಮೀಸಲಾತಿ ಪ್ರಕಟವಾಗಿ ಆಯ್ಕೆ ನಡೆಯಬೇಕಿತ್ತು. ಆದರೆ ಕಾನೂನು ಸಂಘರ್ಷದಿಂದ ಈ ಪ್ರಕ್ರಿಯೆ ನನೆಗುದಿಗೆ ಬಿದ್ದುದ್ದು ಸರ್ಕಾರ ಕೂಡ ಈ ಬಗ್ಗೆ ಆಸಕ್ತಿ ತೋರುತ್ತಿಲ್ಲ ಎನ್ನಲಾಗುತ್ತಿದೆ. ನಗರ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳ ಹಿತದೃಷ್ಟಿಯಿಂದ ಆದಷ್ಟು ಬೇಗ ಕಾನೂನು ತೊಡಕುಗಳನ್ನು ನಿವಾರಿಸಿ ಮೀಸಲಾತಿ ಪ್ರಕಟಿಸಲು ಕ್ರಮಕೈಗೊಳ್ಳುವ ಕುರಿತು ಮಾನ್ಯ ಪೌರಾಡಳಿತ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

********

ಸಾಲಿಗ್ರಾಮ ಪಟ್ಟಣ ಪಂಚಾಯಿತಿಯ ಅಧ್ಯಕ್ಷ/ಉಪಾಧ್ಯಕ್ಷರ ಅವಧಿಯು ದಿನಾಂಕ:01.05.2023ಕ್ಕೆ ಮುಕ್ತಾಯಗೊಂಡಿರುವ ಹಿನ್ನೆಲೆಯಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 48 ಎಂಎಲ್‌ಆರ್ 2023; ದಿನಾಂಕ:25.05.2023ರಲ್ಲಿ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ-315ರನ್ವಯ ಆಡಳಿತಾತ್ಮಕ ಹಿತದೃಷ್ಠಿಯಿಂದ ದಿನಾಂಕ:02.05.2023ರಿಂದ ಜಾರಿಗೆ ಬರುವಂತೆ ಹೊಸ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ಸಾಲಿಗ್ರಾಮ ಪಟ್ಟಣ ಪಂಚಾಯಿತಿಯ ದೈನಂದಿನ ಆಡಳಿತಾತ್ಮಕ ಚಟುವಟಿಕೆಗಳಿಗೆ ಮತ್ತು ಅಭಿವೃದ್ಧಿ ಕಾರ್ಯಗಳ ಕಾರ್ಯನಿರ್ವಹಣೆಗಾಗಿ ತಹಶೀಲ್ದಾರ್, ಬ್ರಹ್ಮಾವರ ತಾಲ್ಲೂಕು ರವರನ್ನು ಆಡಳಿತಾಧಿಕಾರಿಯಾಗಿ ನೇಮಕ ಮಾಡಿ ಆದೇಶಿಸಲಾಗಿರುತ್ತದೆ.

ಉಡುಪಿ ನಗರಸಭೆಯ ಅಧ್ಯಕ್ಷ/ಉಪಾಧ್ಯಕ್ಷರ ಅವಧಿಯು ದಿನಾಂಕ:28.04.2023ರಂದು ಮುಕ್ತಾಯಗೊಂಡಿರುವ ಹಿನ್ನೆಲೆಯಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 48 ಎಂಎಲ್‌ಆರ್ 2023, ದಿನಾಂಕ:12.05.2023ರಲ್ಲಿ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ-315ರನ್ವಯ ಆಡಳಿತಾತ್ಮಕ ಹಿತದೃಷ್ಠಿಯಿಂದ ದಿನಾಂಕ:29.04.2023ರಿಂದ ಜಾರಿಗೆ ಬರುವಂತೆ ಹೊಸ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ಉಡುಪಿ ನಗರಸಭೆಯ ದೈನಂದಿನ ಆಡಳಿತಾತ್ಮಕ ಚಟುವಟಿಕೆಗಳಿಗೆ ಮತ್ತು ಅಭಿವೃದ್ಧಿ ಕಾರ್ಯಗಳ ಕಾರ್ಯನಿರ್ವಹಣೆಗಾಗಿ ಉಡುಪಿ ಜಿಲ್ಲಾಧಿಕಾರಿಗಳನ್ನು ಆಡಳಿತಾಧಿಕಾರಿಯಾಗಿ ನೇಮಕ ಮಾಡಿ ಆದೇಶಿಸಲಾಗಿರುತ್ತದೆ.

ಮೇಲಿನಂತೆ ಉಡುಪಿ ನಗರಸಭೆಗೆ ಜಿಲ್ಲಾಧಿಕಾರಿಗಳು, ಉಡುಪಿ ಹಾಗೂ ಸಾಲಿಗ್ರಾಮ ಪಟ್ಟಣ ಪಂಚಾಯಿತಿಗೆ ತಹಶೀಲ್ದಾರ್, ಬ್ರಹ್ಮಾವರ ತಾಲ್ಲೂಕು ಇವರುಗಳು ಆಡಳಿತಾಧಿಕಾರಿಗಳಾಗಿದ್ದು, ನಗರಸಭೆ / ಪಟ್ಟಣ ಪಂಚಾಯಿತಿಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಅಭಿವೃದ್ಧಿ ಕಾಮಗಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕರ್ತವ್ಯನಿರ್ವಹಿಸುತ್ತಿದ್ದಾರೆ.

ಅಧ್ಯಕ್ಷ / ಉಪಾಧ್ಯಕ್ಷರ ಮೀಸಲಾತಿ ನಿಗದಿಪಡಿಸುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ನ್ಯಾಯಾಲಯ ಪ್ರಕರಣಗಳು ಬಾಕಿ ಇರುತ್ತವೆ:

1) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರ ಪ್ರಕರಣದಲ್ಲಿ ದಿನಾಂಕ: 15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ:17.12.2021ರಂದು ನೀಡಿರುವ ಆದೇಶದನ್ವಯ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ನಿವೃತ್ತ ನ್ಯಾಯಾಧೀಶರಾದ ಡಾ|| ಜಸ್ಟೀಸ್ ಕೆ.ಭಕ್ತವತ್ಸಲ ರವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿತ್ತು. ಆಯೋಗವು ನೀಡಿರುವ ವರದಿಯಲ್ಲಿ ಇದುವರೆಗೂ ಹಿಂದುಳಿದ ವರ್ಗಗಳಿಗೆ ನಿಗಧಿಪಡಿಸಿರುವ ಶೇ.33ರಷ್ಟು ರಾಜಕೀಯ ಮೀಸಲಾತಿಯನ್ನೇ ಅನುಸರಿಸಿರುವಂತೆ ತಿಳಿಸಿರುತ್ತದೆ. ಸದರಿ ವರದಿಯನ್ನು ದಿನಾಂಕ:05.10.2023 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಿದ್ದು, ಆಯೋಗದ ಮೂರು ಶಿಫಾರಸ್ಸುಗಳನ್ನು ಅಂಗೀಕರಿಸಲಾಗಿರುತ್ತದೆ. ಈ ಶಿಫಾರಸ್ಸುಗಳ ಪೈಕಿ ನಗರ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣಾ ಘಟಕವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಯಲ್ಲಿ ನಿರ್ವಹಿಸುವಂತೆ / ಹಸ್ತಾಂತರಿಸುವಂತೆ ಅನುಮೋದನೆ ನೀಡಲಾಗಿರುತ್ತದೆ.

ಪ್ರಸ್ತುತ, ಸರ್ಕಾರದ ಆದೇಶ ಸಂಖ್ಯೆ:ಹಿಂವಕ 114 ಬಿಸಿಎ 2022 (ಭಾಗ-6); ದಿನಾಂಕ:06/07/2024ರನ್ವಯ ನಗರ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣಾ ಘಟಕಗಳನ್ನು ನಗರಾಭಿವೃದ್ಧಿ ಇಲಾಖೆಯ ನಿಯಂತ್ರಣದಲ್ಲಿಯೇ ಉಳಿಸಿ, ಪ್ರಸ್ತುತ ಚಾಲ್ತಿಯಲ್ಲಿರುವ ವ್ಯವಸ್ಥೆಯನ್ನು ಮುಂದುವರೆಸುವಂತೆ ಆದೇಶಿಸಲಾಗಿರುತ್ತದೆ.

2) ರಾಜ್ಯದಲ್ಲಿನ ಕೆಲವು ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ- ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿರುತ್ತದೆ. ಈ ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್‌ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡೇವಿಟ್ ದಾಖಲಿಸಲಾಗಿರುತ್ತದೆ. ಈ ಪ್ರಕರಣವು ದಿನಾಂಕ:16.07.2024 ರಂದು ವಿಚಾರಣೆಗೆ ಬಂದಿದ್ದು, ಮುಂದಿನ ವಿಚಾರಣೆಯು ನಿಗಧಿಯಾಗಿರುವುದಿಲ್ಲ.

3) ಈ ಮಧ್ಯೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಪೀಠ ಇಲ್ಲಿ ರಿಟ್ ಅರ್ಜಿ ಸಂಖ್ಯೆ: 2448/2024ನ್ನು ಶ್ರೀ ಸೈಯದ್ ನಸರುಲ್ಲಾ, ಚಿತ್ರದುರ್ಗ ಜಿಲ್ಲೆ ಮತ್ತು ಇತರರು ದಾಖಲಿಸಿದ್ದು, ಅಧ್ಯಕ್ಷ-ಉಪಾಧ್ಯಕ್ಷ ಚುನಾವಣೆಗಳನ್ನು ನಡೆಸಲು ನಿರ್ದೇಶನ ನೀಡುವಂತೆ ಕೋರಿರುತ್ತಾರೆ (ಈ ಪ್ರಕರಣದೊಂದಿಗೆ ರಿಟ್ ಅರ್ಜಿ ಸಂಖ್ಯೆ:3117/2024 & ರಿಟ್ ಅರ್ಜಿ ಸಂಖ್ಯೆ: 3438/2024ರ ಪ್ರಕರಣಗಳನ್ನು ಲಿಂಕ್ ಮಾಡಲಾಗಿರುತ್ತದೆ).

ರಿಟ್ ಅರ್ಜಿ ಸಂಖ್ಯೆ:2448/2024ರ ಪ್ರಕರಣದಲ್ಲಿ ದಿನಾಂಕ:27.05.2024 & 10.06.2024ರಂದು ನಡೆದ ವಿಚಾರಣೆಯಲ್ಲಿ ನೀಡಿರುವ ದೈನಂದಿನ ಆದೇಶದಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಿಗೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳ ಮೀಸಲಾತಿಯನ್ನು ನಿಗಧಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ.

ನ್ಯಾಯಾಲಯದ ದೈನಂದಿನ ಆದೇಶದ ಹಿನ್ನೆಲೆಯಲ್ಲಿ ಪ್ರಸ್ತುತ ಕರ್ನಾಟಕ ಪೌರಸಭೆಗಳು (ಅಧ್ಯಕ್ಷರು ಮತ್ತು ಉಪಾಧ್ಯಕ್ಷರ) ಚುನಾವಣೆ (ತಿದ್ದುಪಡಿ) ನಿಯಮಗಳು, 2024ರ ಕರಡು ಅಧಿಸೂಚನೆಯನ್ನು ದಿನಾಂಕ:12.07.2024 ರಂದು ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ, ಸದರಿ ಕರಡು ನಿಯಮಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಸಲಹೆ / ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿರುತ್ತದೆ. ಕರಡು ನಿಯಮಗಳಿಗೆ ಸ್ವೀಕೃತವಾಗುವ ಆಕ್ಷೇಪಣೆ / ಸಲಹೆಗಳನ್ನು ಪರಿಶೀಲಿಸಿ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ.

---

**ಸಂಖ್ಯೆ:ನಅಇ 48 ಎಲ್‌ಸಿಕ್ಯೂ 2024**

**(ರಹೀಂ ಖಾನ್)**
**ಪೌರಾಡಳಿತ ಮತ್ತು ಹಜ್ ಸಚಿವರು**